**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:575/2023**

**ಪಿ.ಡಬ್ಲ್ಯೂ-4**
**ಸಿ.ಡಬ್ಲ್ಯೂ-9**

**ಸಾಕ್ಷಿಗೆ ದಿನಾಂಕ 20-9-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.**

ಸಾಕ್ಷಿಯ ಹೆಸರು : ಆಶಾ

ಗಂಡನ ಹೆಸರು : ಚಂದ್ರಶೇಖರ್

ವಯಸ್ಸು : 39 ವರ್ಷ

ಉದ್ಯೋಗ : ಗೃಹಿಣಿ

ವಾಸಸ್ಥಳ : ಅತ್ತಿಮಗ್ಗೆ

<u>ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ</u>

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ನನ್ನ ಗಂಡ. ಚಾಸಾ-8 ಮತ್ತು 9 ರವರ ಪರಿಚಯ ಇರುತ್ತದೆ.

**ಸಾಕ್ಷಿಯು ಕೃತ್ಯ ಸ್ಥಳ ಪರಿಶೀಲನಾ ಪಂಚನಾಮೆ ಮತ್ತು ನಕಾಶೆಯನ್ನು ಹಾಗೂ ಅವುಗಳ ಮೇಲೆ ಇರುವ ಸಹಿಗಳನ್ನು ನೋಡಿ ಗುರುತಿಸಿದ್ದು, ಸದರಿ ದಾಖಲಾತಿಗಳನ್ನು ಈಗಾಗಲೇ ನಿಪಿ-2 ಮತ್ತು 3 ಎಂದು ಕ್ರಮವಾಗಿ ಗುರುತಿಸಿದ್ದು ಹಾಗೂ ಸಾಕ್ಷಿಯ ಸಹಿಗಳನ್ನು ನಿಪಿ-2(ಸಿ) ಮತ್ತು ನಿಪಿ-03(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಫೋಟೋವನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದೆ.** ನಿಪಿ-2 ಮತ್ತು 3 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ಅವುಗಳಿಗೆ ಸಹಿಯನ್ನು ಸುಮಾರು 2 ವರ್ಷಗಳ ಹಿಂದೆ ಮಾಡಿರುತ್ತೇನೆ. ನಿಪಿ-4 ರ ಫೋಟೋವನ್ನು ಯಾವ ಉದ್ದೇಶಕ್ಕಾಗಿ ತೆಗೆಯಲಾಯಿತು ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯ ವಾಹನ ಪರಿಶೀಲನಾ ಪಂಚನಾಮೆಯನ್ನು ನೋಡಿ ಗುರುತಿಸಿದ್ದು **ಪಂಚನಾಮೆಯನ್ನು ನಿಪಿ-5 ಎಂದು ಈಗಾಗಲೇ ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-5(ಸಿ) ಎಂದು ಗುರುತಿಸಲಾಯಿತು.** ನಿಪಿ-5 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೊಲೀಸರು ನನ್ನಸಮಕ್ಷಮ ಯಾವುದೇ ಸ್ಥಳ ಪಂಚನಾಮೆ ಮಾಡಿರುವುದಿಲ್ಲ ಮತ್ತು ವಾಹನ ಪರಶೀಲನಾ ಪಂಚನಾಮೆ ಮಾಡಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ದಿನಾಂಕ 11-10-2022 ರಂದು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಭವಿಸಿದ ಅಪಘಾತಕ್ಕೆ ಸಂಬಂಧಿಸಿದಂತೆ ದಿನಾಂಕ 14-10-2022 ರಂದು ಚಾಸಾ-14 ರವರು ಕೃತ್ಯ ಸ್ಥಳಕ್ಕೆ ಬಂದಿದ್ದು ನಾನು ತೋರಿಸಿದ ಸ್ಥಳದಲ್ಲಿ ಚಾಸಾ-7 ಮತ್ತು 8 ರವರ ಸಮಕ್ಷಮ ಸಂಜೆ 4 ಗಂಟೆಯಿಂದ 4-45 ಗಂಟೆವರೆಗೆ ನಿಪಿ-2 ರಂತೆ ಸ್ಥಳ ಪಂಚನಾಮೆ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ಸ್ಥಳದಲ್ಲಿ ಹಾಜರಿದ್ದು ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-3 ರಂತೆ ಕೃತ್ಯಸ್ಥಳ ನಕಾಶೆ ತಯಾರಿಸಿದ್ದು ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಕೃತ್ಯ ಸ್ಥಳದಲ್ಲಿ ನಿಪಿ-4 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ದಿನ ಚಾಸಾ-14 ರವರು ಹೊಸದುರ್ಗ ಪೊಲೀಸ್ ಠಾಣಾ ಕಾಂಪೌಂಡು ಆವರಣದಲ್ಲಿ ನಿಲ್ಲಿಸಿದ್ದ ಅಪಘಾತಕ್ಕೆ ಒಳಗಾದ ವಾಹನ ಪರಿಶೀಲನಾ ಪಂಚನಾಮೆಯನ್ನು ನಿಪಿ-5 ರಂತೆ ಸಂಜೆ 5-30 ರಿಂದ 6-15 ರವರೆಗೆ ನನ್ನ ಮತ್ತು ಚಾಸಾ-7 ಮತ್ತು 8 ರವರ ಸಮಕ್ಷಮದಲ್ಲಿ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ನಿಪಿ-5 ಕ್ಕೆ ಸ್ಥಳದಲ್ಲಿ ಹಾಜರಿದ್ದು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ನಾನು ನಿಪಿ2 ರಂತೆ ಮಹಜರ್ ಕಾಲದಲ್ಲಿ ಹಾಜರಿದ್ದು, ನಿಪಿ-5 ರಂತೆ ವಾಹನ ಪರಿಶೀಲನಾ ಪಂಚನಾಮೆ ಸಮಯದಲ್ಲಿ ಹಾಜರಿದ್ದರೂ ಸಹ ಆರೋಪಿ ನನ್ನ ಗಂಡನಾದ ಕಾರಣ ಆತನಿಗೆ ಸಹಾಯ ಮಾಡಲುಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಡಿ ಜಿ ವಕೀಲರಿಂದಃ</u>**

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ಸಲ್ಲಿಸುತ್ತಾರೆ._

**<u>ಮರು ವಿಚಾರಣೆ : ಇಲ್ಲ</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೆ.ಸರಿ ಅದೆ.**

**(ಪ್ರಸನ್ನಕುಮಾರ್ ಸಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ**
**ಪ್ರ.ದ.ನ್ಯಾ.ದಂಡಾಧಿಕಾರಿಗಳು,**

ಹೊಸದುರ್ಗ.